ಕೊಳ್ಳೇಗಾಲ ಪಟ್ಟಣದಲ್ಲಿ ಅಗ್ನಿಶಾಮಕ ಠಾಣೆ ತೆರೆಯುವುದು.

2390 (2821) ಶ್ರೀ ನಂಜುಂಡಸ್ವಾಮಿ ಜಿ.ಎಸ್. (ಕೊಳ್ಳೇಗಾಲ) :— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಕೊಳ್ಳೇಗಾಲ ತಾಲ್ಲೂಕಿನಲ್ಲಿ ಅಗ್ನಿ ಅನಾಹುತಗಳು ಹೆಚ್ಚಾಗಿದ್ದು ಅಗ್ನಿಶಾಮಕ ಠಾಣೆಯ ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ ಅಗ್ನಿಶಾಮಕ ಠಾಣೆ ತೆರೆಯಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಇ) ಹಾಗಿದ್ದಲ್ಲಿ, ಅಗ್ನಿಶಾಮಕ ಠಾಣೆ ತೆರೆಯಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೆ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :—

ಅ) ಬೇಡಿಕೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಕೊಳ್ಳೇಗಾಲ ಪಟ್ಟಣದ ಹನೂರು ಪಟ್ಟಣಕ್ಕೆ 24. ಕಿ.ಮಿ. ಅಂತರದಲ್ಲಿ ಇದ್ದು ಕೊಳ್ಳೇಗಾಲ ಪಟ್ಟಣದಲ್ಲಿ ಸಂಭವಿಸಬಹುದಾದ ಅಗ್ನಿ ದುರಂತಗಳನ್ನು ನಿಯಂತ್ರಿಸಲು ಹನೂರು ಪಟ್ಟಣದಿಂದ ಅಗ್ನಿಶಾಮಕ ವಾಹನಗಳನ್ನು ಅಲ್ಲಿಗೆ ಕಳುಹಿಸಬಹುದು. ಆದುದರಿಂದ ಇಲ್ಲಿ ಅಗ್ನಿಶಾಮಕ ಠಾಣೆ ತೆರೆಯುವ ಅವಶ್ಯಕತೆ ಕಂಡು ಬರುವುದಿಲ್ಲ.

ಕೊಳ್ಳೇಗಾಲ ನಗರದಲ್ಲಿ ಸಂಚಾರಿ ಪೋಲೀಸ್ ಠಾಣೆ

2391 (2822) ಶ್ರೀ ಜಿ.ಎನ್. ನಂಜುಂಡಸ್ವಾಮಿ (ಕೊಳ್ಳೇಗಾಲ) :— ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಎರಡು ರಾಷ್ಟ್ರೀಯ ಹೆದ್ದಾರಿಗಳು ಹಾದು ಹೋಗುವ ಕೊಳ್ಳೇಗಾಲ ನಗರದಲ್ಲಿ ಸಂಚಾರಿ ಪೋಲೀಸ್ ಠಾಣೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸಂಚಾರಿ ಪೋಲೀಸ್ ಠಾಣೆ ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :—

ಅ) ಹೌದು.

ಆ) ಕೊಳ್ಳೇಗಾಲ ಪಟ್ಟಣದಲ್ಲಿ ಈಗಾಗಲೇ ಪೂರ್ಣ ಪ್ರಮಾಣದ ಪೋಲೀಸ್ ಠಾಣೆಯಿದ್ದು ನಿಗದಿತ ಸಿಬ್ಬಂದಿಯನ್ನು ಹೊಂದುದೆ. ಅಲ್ಲಿಗೆ ಸಂಚಾರಿ ಠಾಣೆಯ ಅವಶ್ಯಕತೆ ಕಂಡು ಬರುವುದಿಲ್ಲ.